# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಚೌಡೇಶ್ವರಿ ವಾರ್ಡ್ ನಂ-02ರಲ್ಲಿ

## ದಿನಾಂಕ: 18-09-2021 ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ಅಶೋಕ್ ಪಾಟಿಲ್ ನೋಡಲ್ ಅಧಿಕಾರಿಗಳು.
2. ಶ್ರೀ.ಚಂದ್ರಕಾಂತ್‌ರಾಜ್ ಪಿ.ಎ ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ. ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ.
4. ಶ್ರೀ.ಚಂದ್ರಪ್ಪ ಅರಣ್ಯ ಇಲಾಖೆ, ಬಿ.ಬಿ.ಎಂ.ಪಿ ಯಲಹಂಕ ವಲಯ.
5. ಶ್ರೀ.ಬಾಬು ರೆಡ್ಡಿ ಸಹಾಯಕ ಅಭಿಯಂತರರು ವಿದ್ಯುತ್.
6. ಶ್ರೀಮತಿ. ನಂದಶ್ರೀ. ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.
7. ಶ್ರೀ.ಶಿವಕುಮಾರ್ ಕಂದಾಯ ಪರಿವೀಕ್ಷಕರು ವಾರ್ಡ್ ನಂ-01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ಚೌಡೇಶ್ವರಿ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿರುವ ಯಲಹಂಕ ಕೆರೆಯ ದೋಬಿ ಘಾಟ್‌ನಲ್ಲಿರುವ ಬೋರ್‌ವೆಲ್ ಇದ್ದು, ನೀರು ಸರಿಯಾದ ರೀತಿಯಲ್ಲಿ ಬರುತ್ತಿಲ್ಲವೆಂದು ಕೂಡಲೇ ಬೋರ್‌ವೆಲ್ ಅನ್ನು ದುರಸ್ಥಿಪಡಿಸಿಕೊಡಬೇಕೆಂದು ಶ್ರೀ. ಅ ಬ ಶಿವಕುಮಾರ್ ರವರು ಸಭೆಯಲ್ಲಿ ಕೋರಿದರು. | ಸಹಾಯಕ ಅಭಿಯಂತರರು ಬಿ.ಡಬ್ಲ್ಯೂಎಸ್.ಎಸ್.ಬಿ ರವರಿಗೆ ಸ್ಥಳದಲ್ಲಿ ಪರಿಶಿಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ (ವಾರ್ಡ್ ನಂ-01) |
| 02 | ವಾರ್ಡ್ ನಂ-03 & 04 ಬಿ.ಬಿ.ಎಂ.ಪಿ ಟ್ರ್ಯಾಕ್ಟರ್‌ಗಳಿಂದ ಡೆಬ್ರಿಸ್ ತುಂಬಿಕೊಂಡು ಪುಟ್ಟೇನಹಳ್ಳಿ ಕೆರೆ ಕೆ.ಪಿ.ಟಿ.ಸಿ.ಎಲ್ ಹತ್ತಿರ ಡಂಪಿಂಗ್ ಮಾಡುತ್ತಿರುವುದಾಗಿ ಕೂಡಲೇ ಸದರಿಯವರ ಮೇಲೆ ಸೂಕ್ತ ಕ್ರಮ ಕೈಗೊಳ್ಳುವಂತೆ ಶ್ರೀಮತಿ. ಪದ್ಮಾ ಪಾಟಿಲ್ ಆರ್.ಡಬ್ಲ್ಯೂ.ಎ ರವರು ಸಭೆಯಲ್ಲಿ ದೂರನ್ನು ನೀಡಿದರು. | ಸಂಬಂದಿಸಿದ ಸಹಾಯಕ ಕಾರ್ಯಪಾಲಕ ಅಭಿಯಂತರರು ಯಲಹಂಕ ಉಪ ನಗರ ಉಪ ವಿಭಾಗಕ್ಕೆ ಹಾಗೂ ವಾರ್ಡ್ ನಂ - 03 & 04ರಲ್ಲಿರುವ ಸಹಾಯಕ ಅಭಿಯಂತರರುಗಳಿಗೆ ಮಾಹಿತಿ ನೀಡಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ನೊಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಅಭಿಯಂತರರು (ವಾರ್ಡ್ -2) |
| 03 | ವಾರ್ಡ್ ನಂ -02ರ ವ್ಯಾಪ್ತಿಯಲ್ಲಿ ಪಿ.ಜಿ.ಗಳ ಸಂಖ್ಯೆ ಹೆಚ್ಚಾಗಿದ್ದು, ಪಿ.ಜಿ.ಕಟ್ಟಡಗಳಿಂದ ಘನತ್ಯಾಜ್ಯ ವಸ್ತುಗಳ ಸಂಗ್ರಹಣೆ ಸರಿಯಾದ ರೀತಿಯಲ್ಲಿ ಮಾಡುತ್ತಿರುವುದಿಲ್ಲ ವೆಂದು ಆಕ್ಷೇಪಣೆ ಮಾಡಿ | ಆರೋಗ್ಯಾಧಿಕಾರಿಗಳಿಗೆ ತಿಳಿಸುವುದಾಗಿ ಸಭೆಯಲ್ಲಿ ನೊಡೆಲ್ ಅಧಿಕಾರಿಗಳು ತಿಳಿಸಿದರು. | ಆರೋಗ್ಯಾಧಿಕಾರಿಗಳು ಯಲಹಂಕ ವಲಯ |

| | | | |
|---|---|---|---|
| | ಸದರಿ ಪಿ.ಜಿ.ಮಾಲೀಕರಿಗೆ ದಂಡ ವಿಧಿಸಬೇಕೆಂದು ಶ್ರೀಮತಿ ಪದ್ಮ ಪಾಟಿಲ್ ರವರು ಕೋರಿದರು. | | |
| 03 | ಶ್ರೀಮತಿ. ಪದ್ಮಾ ಪಾಟಿಲ್ ಆರ್.ಡಬ್ಲ್ಯೂ.ಎ ರವರು ಸಭೆಯಲ್ಲಿ ಮಾತನಾಡಿ ವಾರ್ಡ್ ನಂ-2ರ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿ ನಡೆಯುತ್ತಿಲ್ಲ ಹಾಗೂ ಹಸಿ ಕಸ ಮತ್ತು ಒಣ ಕಸವನ್ನು ಸರಿಯಾದ ರೀತಿಯಲ್ಲಿ ಬೇರ್ಪಡಿಸುತ್ತಿಲ್ಲವೆಂದು ಆಕ್ಷೇಪಿಸಿ 4 ಸಂಖ್ಯೆ ಅಟೋಗಳನ್ನು ನಿಯೋಜಿಸಿಕೊಡಬೇಕೆಂದು ಸಭೆಯಲ್ಲಿ ಕೋರಿದರು. | ಆರೋಗ್ಯಾಧಿಕಾರಿಗಳಿಗೆ ತಿಳಿಸುವುದಾಗಿ ಸಭೆಯಲ್ಲಿ ನೋಡೆಲ್ ಅಧಿಕಾರಿಗಳು ತಿಳಿಸಿದರು. | ಆರೋಗ್ಯಾಧಿಕಾರಿಗಳು ಯಲಹಂಕ ವಲಯ |
| 04 | ವಾರ್ಡ್ ನಂ -02ರಲ್ಲಿರುವ ಕೊಂಡಪ್ಪ ಬಡಾವಣೆಯಲ್ಲಿ ಒಳಚರಂಡಿ ನೀರನ್ನು ತೆರೆದ ಮೋರಿಗೆ ಬಿಡುತ್ತಿದ್ದು, ಕೂಡಲೇ ಒಳಚರಂಡಿ ಸಂಪರ್ಕ ನೀಡಬೇಕೆಂದು ಸಭೆಯಲ್ಲಿ ಕೋರಿದರು. | ಶ್ರೀ.ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಮಾತನಾಡಿ ಕೊಂಡಪ್ಪ ಬಡಾವಣೆಯಲ್ಲಿ ವಾಸಿಸುವ ಜನರು ಶುಲ್ಕ ಪಾವತಿಸಿ ಒಳಚರಂಡಿ ಸಂಪರ್ಕ ಪಡೆದಿರುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದರು. | ಶ್ರೀ.ಶಶಿಕುಮಾರ್ ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

20/9/2021
ಕಾರ್ಯದರ್ಶಿಗಳು/ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

20/09/2021
ವಾರ್ಡ್‌ನ ನೋಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

**ಪ್ರತಿಯನ್ನು:**

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ಅಶೋಕ್ ಪಾಟಿಲ್ ನೊಡಲ್ ಅಧಿಕಾರಿಗಳು.

ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.